ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಮೈಸೂರು ಲ್ಯಾಂಪ್ಸ್ ಸಂಸ್ಥೆಗಳ ಕುರಿತು

ಶ್ರೀ ಪ್ರಕಾಶ್ ಕೆ. ರಾಥೋಡ್(ನಾಮನಿರ್ದೇಶನ ಹೊಂದಿದವರು ) –

694 (818) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಲ್ಯಾಂಪ್ಸ್ ಸಂಸ್ಥೆಯನ್ನು ಮುಚ್ಚಲಾಗಿದೆಯೇ;

(ಆ) ಹಾಗಿದ್ದಲ್ಲಿ, ಸಂಸ್ಥೆಯಲ್ಲಿ ಉಳಿದಿರುವ ಸಿಬ್ಬಂದಿ ಎಷ್ಟು; ಆ ಸಿಬ್ಬಂದಿಗಳನ್ನು ಯಾವ ಯಾವ ಸಂಸ್ಥೆಗಳಿಗೆ ನಿಯೋಜನೆ ಮಾಡಲಾಗಿದೆ; (ವಿವರ ನೀಡುವುದು)

(ಇ) ಮೈಸೂರು ಲ್ಯಾಂಪ್ಸ್ ಸಂಸ್ಥೆಯಲ್ಲಿ ನೌಕರರು ತಮ್ಮ ಡಿ.ಎ. ಹಾಗೂ ಇನ್ನಿತರೆ ಸೌಲಭ್ಯಗಳನ್ನು ಪಡೆಯದೇ ಸೇವೆ ಸಲ್ಲಿಸಿರುವುದನ್ನು ಪರಿಗಣಿಸಿ, ಇವರಿಗೆ ಸರ್ಕಾರದಿಂದ ನೆರವು ನೀಡಲಾಗುವುದೇ;

(ಈ) ಮೈಸೂರು ಲ್ಯಾಂಪ್ಸ್ ಸಂಸ್ಥೆಯ ಒಟ್ಟು ಆಸ್ತಿಮೌಲ್ಯ ಎಷ್ಟು; ಈ ಆಸ್ತಿಯನ್ನು ಯಾವ ಸಂಸ್ಥೆಗೆ ಪರಭಾರೆ ಮಾಡಲಾಗಿದೆ; ನೌಕರರು ಹಾಗೂ ಷೇರುದಾರರಿಗೆ ನೀಡಬೇಕಾಗಿರುವ ಹಣದ ಮೊತ್ತ ಎಷ್ಟು? (ವಿವರ ನೀಡುವುದು)